ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

13. ಕಬ್ಬು ಬೆಳೆಗಾರರಿಗೆ ಹನಿ ನೀರಾವರಿ ಅಳವಡಿಸಿಕೊಡುವ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

595 (759) ಮಾನ್ಯ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಹನಿ ನೀರಾವರಿ ಯೋಜನೆಯನ್ನು ಕಲ್ಪಿಸಿ ಕೊಡಲು ಸರ್ಕಾರ ನಿರ್ಧರಿಸಿದೆ ; ಇದರ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆ ; ಇದ್ದಲ್ಲಿ ಅಂದಾಜು ಮೊತ್ತ ಎಷ್ಟು ;

(ಆ) ರೈತರು ತಮ್ಮ ಜಮೀನುಗಳಲ್ಲಿ ಹನಿ ನೀರಾವರಿ ಸೌಲಭ್ಯ ಕಲ್ಪಿಸಿಕೊಳ್ಳಲು ಇರುವ ಮಾನದಂಡಗಳೇನು ; ಇದರ ಬಗ್ಗೆ ರೈತರಿಗೆ ಸೂಕ್ತ ಮಾಹಿತಿ/ಮಾರ್ಗದರ್ಶನ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) 2017-18 ಹಾಗೂ 2018-19ನೇ ಸಾಲಿಗೆ ಈ ಯೋಜನೆಯನ್ನು ಕಲ್ಪಿಸಲು ಕಾಯ್ದಿರಿಸಲಾಗಿದ್ದ ಅನುದಾನ ಎಷ್ಟು; ಬಳಕೆ ಮಾಡಿದ ಅನುದಾನವೆಷ್ಟು ;

(ಈ) ಯಾವ ಕಾಲಮಿತಿಯಲ್ಲಿ ಈ ಸೌಲಭ್ಯವನ್ನು ರೈತರಿಗೆ ಒದಗಿಸಲಾಗುವುದು ? (ವಿವರ ಒದಗಿಸುವುದು)